Akashvani : Bangalore
National Bulletins In Kannada
13.09.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
13.09.2025 : 7.35AM
**********

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಮಿಜೋರಾಂ, ಮಣಿಪುರ, ಅಸ್ಸಾಂಗೆ ಇಂದು ಭೇಟಿ; ಹಲವು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
2. ಭಾರತೀಯ ರಾಷ್ಟ್ರೀಯ ಪಾವತಿ ನಿಗಮದಿಂದ ಏಕೀಕೃತ ಪಾವತಿ ಇಂಟರ್‌ಫೇಸ್‌ನಲ್ಲಿ ಮಹತ್ವದ ಬದಲಾವಣೆ; ಸೋಮವಾರದಿಂದ ಪರಿಷ್ಕೃತ ನಿಯಮ ಜಾರಿ
3. ಕರ್ನಾಟಕದ ಹಾಸನ ಜಿಲ್ಲೆಯಲ್ಲಿ ಭೀಕರ ರಸ್ತೆ ಅಪಘಾತ: ಕನಿಷ್ಠ ೮ ಮಂದಿ ಸಾವು, ೨೦ಕ್ಕೂ ಹೆಚ್ಚು ಮಂದಿಗೆ ಗಾಯ
4. ನೇಪಾಳ ಮಧ್ಯಂತರ ಸರ್ಕಾರದ ಪ್ರಧಾನಿಯಾಗಿ ನಿವೃತ್ತ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ಪ್ರಮಾಣ ವಚನ ಸ್ವೀಕಾರ
5. ಮಹಿಳೆಯರ ಏಷ್ಯಾ ಕಪ್ ಹಾಕಿ: ಸೂಪರ್ ೪ ಹಂತದಲ್ಲಿ ಭಾರತಕ್ಕೆ ಇಂದು ಜಪಾನ್ ಸವಾಲು

**********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಿಜೋರಾಂನ ಐಜ್ವಾಲ್ ನಲ್ಲಿ ೯ ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು ರೈಲ್ವೆ, ರಸ್ತೆಮಾರ್ಗಗಳು, ಇಂಧನ, ಕ್ರೀಡೆ ಸೇರಿದಂತೆ ಅನೇಕ ಕ್ಷೇತ್ರಗಳ ಆವಶ್ಯಕತೆಗಳನ್ನು ಪೂರೈಸುತ್ತವೆ. ಈ ಸಂದರ್ಭದಲ್ಲಿ ಪ್ರಧಾನಿ ಅವರು ಸಾರ್ವಜನಿಕ ಸಮಾರಂಭವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ವಿಶ್ವದರ್ಜೆಯ ಮೂಲಸೌಕರ್ಯ ಮತ್ತು ಕೊನೆಯ ಹಂತಕ್ಕೂ ಸಂಪರ್ಕ ಕಲ್ಪಿಸುವ ತಮ್ಮ ಬದ್ಧತೆಗೆ ಅನುಗುಣವಾಗಿ, ೮ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ವೆಚ್ಚದಲ್ಲಿ ನಿರ್ಮಿಸಲಾದ ಬೈರಾಬಿ-ಸೈರಾಂಗ್ ಹೊಸ ರೈಲು ಮಾರ್ಗವನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ಸವಾಲಿನ ಗುಡ್ಡಗಾಡು ಪ್ರದೇಶದಲ್ಲಿ ನಿರ್ಮಿಸಲಾದ ರೈಲು ಮಾರ್ಗವು ಸಂಕೀರ್ಣ ಭೌಗೋಳಿಕ ಪರಿಸ್ಥಿತಿಗಳಲ್ಲಿ ನಿರ್ಮಿಸಲಾದ ೪೫ ಸುರಂಗಗಳನ್ನು ಹೊಂದಿದೆ. ಹೆಚ್ಚುವರಿಯಾಗಿ, ಇದು ೫೫ ಪ್ರಮುಖ ಸೇತುವೆಗಳು ಮತ್ತು ೮೮ ಸಣ್ಣ ಸೇತುವೆಗಳನ್ನು ಸಹ ಒಳಗೊಂಡಿದೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನಿರ್ಣಾಯಕ ಬೈರಾಬಿ-ಸೈರಾಂಗ್ ರೈಲು ಮಾರ್ಗವನ್ನು ಉದ್ಘಾಟಿಸುತ್ತಿರುವುದು ಮಿಜೋರಾಂಗೆ ಐತಿಹಾಸಿಕ ಕ್ಷಣ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಬಣ್ಣಿಸಿದ್ದಾರೆ. ಈ ರೈಲು ಮಾರ್ಗವು ಮಿಜೋರಾಂ ರಾಜಧಾನಿ ಐಜ್ವಾಲ್ ಅನ್ನು ಇತಿಹಾಸದಲ್ಲಿ ಮೊದಲ ಬಾರಿಗೆ ಭಾರತೀಯ ರೈಲ್ವೆ ಜಾಲದೊಂದಿಗೆ ಸಂಪರ್ಕಿಸಲಾಗುತ್ತಿದೆ. ೪೫ ಸುರಂಗಗಳು ಮತ್ತು ೫೫ ಪ್ರಮುಖ ಸೇತುವೆಗಳನ್ನು ಒಳಗೊಂಡಿರುವ ಯೋಜನೆಯ ಸಂಕೀರ್ಣತೆಯನ್ನು ಇದು ಬಿಂಬಿಸುತ್ತದೆ.ಹೊಸ ರೈಲು ಮಾರ್ಗ ಸಂಪರ್ಕವನ್ನು ಗಮನಾರ್ಹವಾಗಿ ಸುಧಾರಿಸಲಿದ್ದು, ಮಿಜೋರಾಂನ ಜನರ ಜೀವನ ಮಟ್ಟವನ್ನು  ಪರಿವರ್ತಿಸುತ್ತದೆ ಎಂದು ಅವರು ಒತ್ತಿ ಹೇಳಿದ್ದಾರೆ. ಇಂದು ೩ ಎಕ್ಸ್ ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಲಾಗುವುದು ಎಂದು ಸಚಿವರು ಇದೇ ವೇಳೆ ಮಾಹಿತಿ ನೀಡಿದ್ದಾರೆ.

**********

ಮಿಜೋರಾಂ ಭೇಟಿಯ ನಂತರ ಪ್ರಧಾನಿ, ಮಣಿಪುರದಲ್ಲಿ ೮ ಸಾವಿರದ ೫೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಹಲವು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಮಣಿಪುರದ ಚುರಾಚಂದಪುರದಲ್ಲಿ ಮಧ್ಯಾಹ್ನ ೭ ಸಾವಿರದ ೩೦೦ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಾರ್ವಜನಿಕರನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳಿಕ ಪ್ರಧಾನಿ ಇಂಫಾಲದಲ್ಲಿ ಒಂದು ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಮತ್ತು ಸಾರ್ವಜನಿಕ ಸಮಾರಂಭವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ನಂತರ ಅವರು ಅಸ್ಸಾಂಗೆ ಭೇಟಿ ನೀಡಲಿದ್ದಾರೆ. ಸಂಜೆ ಗುವಾಹತಿಯಲ್ಲಿ ಭಾರತ ರತ್ನ ಡಾ. ಭೂಪೇನ್ ಹಜಾರಿಕಾ ಅವರ ೧೦೦ನೇ ಜನ್ಮ ವಾರ್ಷಿಕೋತ್ಸವದ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ಸಭಿಕರನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ.

**********

ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ - ಎನ್‌ಪಿಸಿಐ, ವ್ಯಕ್ತಿಯಿಂದ ವ್ಯಾಪಾರಿ ವಹಿವಾಟುಗಳಿಗೆ ಏಕೀಕೃತ ಪಾವತಿ ಇಂಟರ್ಫೇಸ್  ಮಿತಿಯ ಕುರಿತು ಮಹತ್ವದ ಪರಿಷ್ಕರಣೆ ಮಾಡಿದೆ. ಹೊಸ ಪರಿಷ್ಕರಣೆಯು ಸೋಮವಾರದಿಂದ ಜಾರಿಗೆ ಬರಲಿದೆ. ಹೊಸ ಯುಪಿಐ ನಿಯಮಗಳನ್ನು ಭಾರತೀಯ ಬಳಕೆದಾರರಿಗೆ ಹೆಚ್ಚಿನ ಮೌಲ್ಯದ ಡಿಜಿಟಲ್ ಪಾವತಿಗಳನ್ನು ಸುಲಭ ಮತ್ತು ಹೆಚ್ಚು ಸುರಕ್ಷಿತವಾಗಿಸಲು ವಿನ್ಯಾಸಗೊಳಿಸಲಾಗಿದೆ ಎಂದು ಕಳೆದ ತಿಂಗಳು ಎನ್‌ಪಿಸಿಐ ಹೊರಡಿಸಿದ ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಈ ಬದಲಾವಣೆಯ ನಂತರ ಬಳಕೆದಾರರು ಈಗ ಆಯ್ದ ಪರಿಶೀಲಿಸಿದ ವಿಭಾಗಗಳಿಗೆ ಒಂದೇ ದಿನದಲ್ಲಿ ೧೦ ಲಕ್ಷ ರೂಪಾಯಿಗಳವರೆಗೆ ಯುಪಿಐ ವ್ಯಾಪಾರಿ ವಹಿವಾಟುಗಳನ್ನು ಮಾಡಬಹುದು. ಆದಾಗ್ಯೂ, ವ್ಯಕ್ತಿಯಿಂದ ವ್ಯಕ್ತಿಗೆ ವರ್ಗಾವಣೆಯ ಯುಪಿಐ ಮಿತಿಯು ದಿನಕ್ಕೆ ೧ ಲಕ್ಷ ರೂ.ಗಳಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ.

**********

ಕರ್ನಾಟಕದ ಹಾಸನ ಜಿಲ್ಲೆಯಲ್ಲಿ ಗಣೇಶಮೂರ್ತಿ ವಿಸರ್ಜನೆಯಲ್ಲಿ ಭಾಗವಹಿಸಿದ್ದ ಜನರ ಮೇಲೆ ಸರಕು ತುಂಬಿದ ಟ್ರಕ್ ನಿಯಂತ್ರಣ ತಪ್ಪಿ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಎಂಟು ಜನರು ಸಾವನ್ನಪ್ಪಿದ್ದು, ೨೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಪೊಲೀಸರ ಪ್ರಕಾರ, ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದರು ಮತ್ತು ಇತರ ನಾಲ್ವರು ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಸಾವನ್ನಪ್ಪಿದ್ದಾರೆ. ಮೃತ ಎಂಟು ಜನರಲ್ಲಿ ಐವರು ಎಂಜಿನಿಯರಿಂಗ್ ವಿದ್ಯಾರ್ಥಿಗಳಾಗಿದ್ದಾರೆ. ರಾಷ್ಟ್ರೀಯ ಹೆದ್ದಾರಿ-೩೭೩ ರಲ್ಲಿ ರಸ್ತೆಯಲ್ಲಿ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಬೈಕನ್ನು ತಪ್ಪಿಸಲು ಪ್ರಯತ್ನಿಸುತ್ತಿದ್ದಾಗ ಈ ಘಟನೆ ಸಂಭವಿಸಿದೆ ಅಪಘಾತದಲ್ಲಿ ಚಾಲಕ ಕೂಡ ಗಾಯಗೊಂಡಿದ್ದು, ಅವರನ್ನು ವಶಕ್ಕೆ ಪಡೆಯಲಾಗಿದೆ ಎಂದು ಹಾಸನ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ ಎಂ.ಎಸ್ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಅಪಘಾತದ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ಸಂತ್ರಸ್ತರ ಕುಟುಂಬಗಳಿಗೆ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

**********

ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ನೇಪಾಳದ ಮಧ್ಯಂತರ ಸರ್ಕಾರದ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ನಿನ್ನೆ ರಾತ್ರಿ ಕಠ್ಮಂಡುವಿನಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ರಾಮಚಂದ್ರ ಪೌದೆಲ್ ಅವರು ಶ್ರೀಮತಿ ಕಾರ್ಕಿ ಅವರಿಗೆ ಪ್ರಮಾಣ ವಚನ ಬೋಧಿಸಿದರು. ಈ ಸಂದರ್ಭದಲ್ಲಿ ಉಪರಾಷ್ಟ್ರಪತಿ ರಾಮಬರನ್ ಯಾದವ್ ಮತ್ತು ಇತರ ಹಲವಾರು ಗಣ್ಯರು ಉಪಸ್ಥಿತರಿದ್ದರು. ಪ್ರಮುಖ ಸಾಮಾಜಿಕ ಮಾಧ್ಯಮಗಳ ಪ್ಲಾಟ್ ಫಾರ್ಮ್‌ಗಳ ಮೇಲೆ ಸರ್ಕಾರದ ನಿಷೇಧ ಮತ್ತು ಭ್ರಷ್ಟಾಚಾರ ಆಡಳಿತದಿಂದ ಉದ್ರಿಕ್ತಗೊಂಡ ಜೆನ್ ಝೀ ಪ್ರತಿಭಟನಾಕಾರರು ಬೀದಿಗಿಳಿದು ವ್ಯಾಪಕ ಪ್ರತಿಭಟನೆ ನಡೆಸಿದ ನಂತರ ಮಧ್ಯಂತರ ಸರ್ಕಾರ ಅಸ್ತಿತ್ವಕ್ಕೆ ಬಂದಿದೆ. ಪೊಲೀಸರು ಹಾಗೂ ಜೆನ್ ಝೀ ನಡುವಿನ ಘರ್ಷಣೆಯಿಂದಾಗಿ ಹಲವಾರು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಪ್ರಧಾನಿ ಕೆ.ಪಿ.ಶರ್ಮಾ ಒಲಿ ಕೂಡ ರಾಜೀನಾಮೆ ನೀಡಬೇಕಾಯಿತು. ಕಳೆದ ಮೂರು ದಿನಗಳ ಕಾಲ ನಡೆದ ತೀವ್ರ ಚರ್ಚೆ ಮತ್ತು ರಾಷ್ಟ್ರಪತಿ ಅರವಣದ ಶೀತಲ್ ನಿವಾಸದಲ್ಲಿ ಔಪಚಾರಿಕ ಮಾತುಕತೆಯ ನಂತರ, ಮಾಜಿ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ಅವರನ್ನು ಹಂಗಾಮಿ ಸರ್ಕಾರದ ಮುಖ್ಯಸ್ಥರನ್ನಾಗಿ ನೇಮಿಸಲು ನಿನ್ನೆ ನಿರ್ಧರಿಸಲಾಯಿತು.

**********

ನೇಪಾಳದಲ್ಲಿ ನಿವೃತ್ತ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ಅವರ ನೇತೃತ್ವದಲ್ಲಿ ಹೊಸ ಮಧ್ಯಂತರ ಸರ್ಕಾರ ರಚನೆಯಾಗಿರುವುದನ್ನು ಭಾರತ ಸ್ವಾಗತಿಸಿದೆ. ಇದು ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳಲು ನೆರವಾಗಲಿದೆ ಎಂದು ಭಾರತ ಭರವಸೆ ಹೊಂದಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ನಿಕಟ ನೆರೆಹೊರೆಯ ಸಹವರ್ತಿ ಪ್ರಜಾಪ್ರಭುತ್ವ ಮತ್ತು ದೀರ್ಘಕಾಲೀನ ಅಭಿವೃದ್ಧಿ ಪಾಲುದಾರನಾಗಿ, ಭಾರತವು ಉಭಯ ದೇಶಗಳ ಜನರ ಯೋಗಕ್ಷೇಮ ಮತ್ತು ಸಮೃದ್ಧಿಗಾಗಿ ನೇಪಾಳದೊಂದಿಗೆ ನಿಕಟ ಕಾರ್ಯ ಮುಂದುವರಿಸುತ್ತದೆ ಎಂದು ಸಚಿವಾಲಯ ಹೇಳಿದೆ.

**********

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ದೆಹಲಿಯಲ್ಲಿ ನಿನ್ನೆ ಯುರೋಪಿಯನ್ ಯೂನಿಯನ್ ವ್ಯಾಪಾರ ಮತ್ತು ಆರ್ಥಿಕ ಭದ್ರತೆಯ ಆಯುಕ್ತ ಮಾರೋಸ್ ಸೆಫ್ಕೋವಿಕ್, ಯುರೋಪಿಯನ್ ಯೂನಿಯನ್ ಕೃಷಿ ಮತ್ತು ಆಹಾರ ಆಯುಕ್ತ ಕ್ರಿಸ್ಟೋಫ್ ಹ್ಯಾನ್ಸೆನ್ ಮತ್ತು ಐರೋಪ್ಯ ಒಕ್ಕೂಟದ ನಿಯೋಗದ ಇತರ ಅಧಿಕಾರಿಗಳನ್ನು ಭೇಟಿ ಮಾಡಿದರು. ಸಮತೋಲಿತ ಮತ್ತು ಪರಸ್ಪರ ಲಾಭದಾಯಕ ಮುಕ್ತ ವ್ಯಾಪಾರ ಒಪ್ಪಂದವನ್ನು ಮುಂದುವರಿಸಲು ಹಾಗೂ ವ್ಯವಹಾರಗಳಿಗೆ ಹೊಸ ಮಾರ್ಗಗಳನ್ನು ಮುಕ್ತಗೊಳಿಸಲು ಭಾರತ ಮತ್ತು ಐರೋಪ್ಯ ಒಕ್ಕೂಟದ ಹಂಚಿಕೆಯ ಬೆಳವಣಿಗೆಗೆ ಅವಕಾಶಗಳನ್ನು ಮತ್ತಷ್ಟು ಎತ್ತರಕ್ಕೇರಿಸಲು  ಉಭಯ ದೇಶಗಳು ಬದ್ಧರಾಗಿವೆ ಎಂದು ಗೋಯಲ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

**********

ಚೀನಾದ ಹ್ಯಾಂಗ್ ಝೌನಲ್ಲಿ ನಡೆಯುತ್ತಿರುವ ಮಹಿಳೆಯರ ಏಷ್ಯಾ ಕಪ್ ಹಾಕಿ ಟೂರ್ನಿಯ ಸೂಪರ್ ೪ ಹಂತದಲ್ಲಿ ಇಂದು ಭಾರತ ಇಂದು ಜಪಾನ್ ತಂಡದ ಸವಾಲು ಎದುರಿಸಲಿದೆ. ಹಿಂದಿನ ಪಂದ್ಯದಲ್ಲಿ ಚೀನಾ ವಿರುದ್ಧ ೧-೪ರಲ್ಲಿ ಸೋತಿರುವ ಭಾರತ, ಫೈನಲ್ ಪ್ರವೇಶಿಸಬೇಕಾದರೆ ಜಪಾನ್ ವಿರುದ್ಧ ಕನಿಷ್ಠ ಡ್ರಾ ಸಾಧಿಸಬೇಕಿದೆ. ಏಷ್ಯಾಕಪ್ ವಿಜೇತ ತಂಡ ಮುಂಬರುವ ಎಫ್ಐಎಚ್ ವಿಶ್ವಕಪ್‌ಗೆ ನೇರ ಅರ್ಹತೆ ಗಳಿಸಲಿರುವ ಹಿನ್ನೆಲೆಯಲ್ಲಿ ಭಾರತದ ಪಾಲಿಗೆ ಈ ಪಂದ್ಯ ಅತ್ಯಂತ ಮಹತ್ವದ್ದಾಗಿದೆ.

**********

ಬಿಹಾರ,  ಪಶ್ಚಿಮ ಬಂಗಾಳ, ಸಿಕ್ಕಿಂ, ತೆಲಂಗಾಣ, ಉತ್ತರಾಖಂಡ ಮತ್ತು ಈಶಾನ್ಯ ರಾಜ್ಯಗಳ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದೆಹಲಿ, ಚಂಡೀಗಢ, ಹರಿಯಾಣ, ಕರ್ನಾಟಕದ ಕರಾವಳಿ ಮತ್ತು ಉತ್ತರ ಒಳನಾಡು, ಛತ್ತೀಸ್‌ಗಢ ಮತ್ತು ಒಡಿಶಾದಲ್ಲಿ ದಿನವಿಡೀ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಮುಂದಿನ ೨-೩ ದಿನಗಳಲ್ಲಿ ಬಿಹಾರ, ಕರ್ನಾಟಕದ ಒಳನಾಡು, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಜಾಖಂಡ್, ಒಡಿಶಾ, ತೆಲಂಗಾಣ ಮತ್ತು ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನಲ್ಲಿ ಗುಡುಗು ಸಹಿತ ಮತ್ತು ಮಿಂಚಿನ ಮಳೆಯಾಗುವ ಸಾಧ್ಯತೆಯಿದೆ. ಆಂಧ್ರಪ್ರದೇಶದ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಬಲವಾದ ಮೇಲ್ಮೈ ಗಾಳಿ ಬೀಸುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

******END****